# ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಡಾ. ತಳವಾರ ಸಾಬಣ್ಣಾ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.

## ವಿಷಯ

ರಾಜ್ಯದ ಎಲ್ಲಾ 430 ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಪ್ರಾಂಶುಪಾಲರು ಇಲ್ಲದೇ, ಪ್ರಭಾರಿ ಪ್ರಾಂಶುಪಾಲರು ಇರುವುದರಿಂದ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಬೆಳವಣಿಗೆಗೆ ಪೂರಕವಾದ ನಿರ್ಣಯ ಕೈಗೊಳ್ಳಲು ಸಾಧ್ಯವಾಗುತ್ತಿಲ್ಲ. ಇದರಿಂದ ವಿದ್ಯಾರ್ಥಿಗಳು ಸೂಕ್ತ ಮೂಲಭೂತ ಸೌಲಭ್ಯ, ಮಾರ್ಗದರ್ಶನ ಸಿಗದೇ ವಂಚಿತರಾಗುತ್ತಿದ್ದಾರೆ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳ ಕಡೆ ಮುಖ ಮಾಡುತ್ತಿದ್ದಾರೆ. ಕಾಲೇಜುಗಳಲ್ಲಿ ಖಾಯಂ ಪ್ರಾಂಶುಪಾಲರೇ ಇಲ್ಲದಿರುವುದರಿಂದ 2023-24 ನೇ ಸಾಲಿನ ಸರಕಾರದ ಅನುದಾನ ಸದ್ಬಳಕೆ ಮಾಡಿಕೊಳ್ಳದೇ ಸಾಕಷ್ಟು ಅನುದಾನ ವಾಪಸ್ಸು ಹೋಗಿರುತ್ತದೆ. 2018 ರ ಯುಜಿಸಿ ನಿಯಮದ ಪ್ರಕಾರ ಎಲ್ಲಾ ರೀತಿಯ ಮಾನದಂಡಗಳನ್ನು ಪೂರೈಸಿರುವ ಪ್ರಾಂಶುಪಾಲರ ಸೇವಾಕಾಂಕ್ಷಿಗಳು ಹೊರಗೆ ಉಳಿಯುವಂತಾಗಿದೆ. 2018 ರ ಯುಜಿಸಿ ಮಾನದಂಡ ಇಲ್ಲದ ಮತ್ತು 15 ವರ್ಷ ಸೇವಾನುಭವ ಇಲ್ಲದ ಪ್ರಾಧ್ಯಾಪಕರು ಪ್ರಭಾರಿ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸರಕಾರ 2020 ರಲ್ಲಿ 310 ಪ್ರಾಂಶುಪಾಲರ ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿರುತ್ತದೆ. ಆದರೆ, ಆಯ್ಕೆ ಪಟ್ಟಿಯನ್ನು ಕಾಲೇಜು ಶಿಕ್ಷಣ ಇಲಾಖೆ ಪ್ರಕಟಿಸದಿರುವುದು ಸೇವಾಕಾಂಕ್ಷಿಗಳ ಆತಂಕಕ್ಕೆ ಕಾರಣವಾಗಿದೆ. ಹಾಗೂ ಬಹಳಷ್ಟು ಸೇವಾಕಾಂಕ್ಷಿಗಳು ನಿವೃತ್ತಿ ಅಂಚಿನಲ್ಲಿದ್ದಾರೆ. ಈ ಹಿನ್ನಲೆಯಲ್ಲಿ, ಸರಕಾರಿ ಪ್ರಥಮ ದರ್ಜೆ ಕಾಲೇಜುಗಳ ಗ್ರೇಡ್-1 ಪ್ರಾಂಶುಪಾಲರ ಹುದ್ದೆಗಳ ಅಂತಿಮ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರನ್ನು ಈ ಮೂಲಕ ಒತ್ತಾಯಿಸುತ್ತೇನೆ.

## ಉತ್ತರ

- ಇಲಾಖೆಯಲ್ಲಿ ಖಾಲಿ ಇರುವ 310 ಪ್ರಾಂಶುಪಾಲರ (ಯು.ಜಿ) ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/121/ಡಿಸಿಇ/2018, ದಿನಾಂಕ:09.09.2020 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ:21.03.2022ರಲ್ಲಿ ಕರ್ನಾಟಕ ಶಿಕ್ಷಣ ಇಲಾಖಾ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರ ಹುದ್ದೆಗಳ ನೇಮಕಾತಿ) (ಸ್ನಾತಕ ಶಿಕ್ಷಣ) (ವಿಶೇಷ) ನಿಯಮಗಳು 2020 ಮತ್ತು ತಿದ್ದುಪಡಿ ನಿಯಮಗಳು 2022ನ್ನು ಜಾರಿಗೊಳಿಸಲಾಗಿದೆ.

- ಸದರಿ ವಿಶೇಷ ನಿಯಮಗಳನ್ವಯ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, 310 ಪ್ರಾಂಶುಪಾಲರ ಹುದ್ದೆಗಳಿಗೆ ನಿಯಮಾನುಸಾರ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ಅಂತಿಮ ಆಯ್ಕೆ ಪಟ್ಟಿಯನ್ನು ಸಲ್ಲಿಸಲು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/121/ಡಿಸಿಇ/2018, ದಿನಾಂಕ:21.03.2022ರಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿದೆ.

- ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (ಕೆ.ಇ.ಎ) ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, ಸ್ಥಳೀಯ ವೃಂದದ (ಹೆಚ್.ಕೆ) 141 ಹಾಗೂ ಉಳಿಕೆ ಮೂಲ ವೃಂದದ (ನಾನ್ ಹೆಚ್.ಕೆ) 813 ಅಭ್ಯರ್ಥಿಗಳ ಅಂತಿಮ ಮೆರಿಟ್ ಪಟ್ಟಿಯನ್ನು ಕೆ.ಇ.ಎ. ವೆಬ್‌ಸೈಟ್ ನಲ್ಲಿ ಪ್ರಕಟಿಸಿ, ಸರ್ಕಾರಕ್ಕೆ ಸಲ್ಲಿಸಿದ್ದ ಸದರಿ ಅಂತಿಮ ಮೆರಿಟ್ ಪಟ್ಟಿಯನ್ನು ಕಾಲೇಜು ಶಿಕ್ಷಣ ಆಯುಕ್ತರ ಅಧ್ಯಕ್ಷತೆಯಲ್ಲಿನ ಆಯ್ಕೆ ಪ್ರಾಧಿಕಾರವು ಶೈಕ್ಷಣಿಕ ಹಾಗೂ ಮೀಸಲಾತಿ ದಾಖಲಾತಿಗಳನ್ನು ಪರಿಶೀಲಿಸಿ, ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಲ್ಲಿಸುವಂತೆ ಸರ್ಕಾರದ ಪತ್ರ ಸಂಖ್ಯೆ:ಇಡಿ 93 ಡಿಸಿಇ 2024(ಇ) ದಿನಾಂಕ:13-03-2024ರಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರಿಗೆ ಸೂಚಿಸಲಾಗಿತ್ತು.

- ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪ್ರಕಟಿಸಲ್ಪಟ್ಟ ಮೆರಿಟ್ ಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ, ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅರ್ಜಿಯಲ್ಲಿ ದಾಖಲಿಸಿದ್ದ ಮಾಹಿತಿಗಳಿಗನುಗುಣವಾಗಿ ವಿದ್ಯಾರ್ಹತೆ, ಮೀಸಲಾತಿ ಮತ್ತಿತರೆ ಅಗತ್ಯ ದೃಢೀಕೃತ ಪ್ರತಿಗಳನ್ನು ಸಲ್ಲಿಸಲು ಅಭ್ಯರ್ಥಿಗಳಿಗೆ ಅವಕಾಶವನ್ನು ನೀಡಲಾಗಿತ್ತು. ಅದರನ್ವಯ ಮೆರಿಟ್ ಪಟ್ಟಿಯಲ್ಲಿನ ಒಟ್ಟು 954 ಅಭ್ಯರ್ಥಿಗಳಲ್ಲಿ 779 ಅಭ್ಯರ್ಥಿಗಳಿಂದ ದಾಖಲೆಗಳು ಸ್ವೀಕೃತವಾಗಿದ್ದು, ಉಳಿದಂತೆ 175 ಅಭ್ಯರ್ಥಿಗಳಿಂದ ದಾಖಲೆಗಳು ಸ್ವೀಕೃತವಾಗಿರುವುದಿಲ್ಲ.

- ಒಟ್ಟು 779 ಅಭ್ಯರ್ಥಿಗಳಿಂದ ಸ್ವೀಕೃತಗೊಂಡ ದಾಖಲೆಗಳಲ್ಲಿ ಶೈಕ್ಷಣಿಕ ಅರ್ಹತೆಗೆ ಸಂಬಂಧಿಸಿದಂತೆ ಸಲ್ಲಿಸಿರುವ ದಾಖಲೆಗಳ ಪರಿಶೀಲನೆಯನ್ನು ಉನ್ನತ ಮಟ್ಟದ ಇಲಾಖಾ ಪರಿಶೀಲನಾ ಸಮಿತಿಯು ಪರಿಶೀಲಿಸಿದ್ದು, ಅದರಂತೆ ಶೈಕ್ಷಣಿಕವಾಗಿ ಅರ್ಹರಾಗಿರುವ ಹಾಗೂ ಅನರ್ಹರಾಗಿರುವ ಅಭ್ಯರ್ಥಿಗಳ ಪಟ್ಟಿಗಳನ್ನು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಅಧಿಕೃತ ಜ್ಞಾಪನ ಸಂ:ಕಾಶಿಇ/ನೇವಿ-1/ಪ್ರಾಹುಭ-2021/61/2025-26, ದಿನಾಂಕ:18.06.2025ರಲ್ಲಿ ಪ್ರಕಟಿಸಿ, ಸಂಬಂಧಪಟ್ಟ ಅಭ್ಯರ್ಥಿಗಳಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

- ಅದರಂತೆ, ಒಟ್ಟು 279 ಅಭ್ಯರ್ಥಿಗಳಿಂದ ಆಕ್ಷೇಪಣೆಗಳು ಸ್ವೀಕೃತವಾಗಿದ್ದು, ಸ್ವೀಕೃತವಾದ ಪ್ರತಿಯೊಂದು ಆಕ್ಷೇಪಣೆಗಳ ಪರಿಶೀಲನೆಯನ್ನು ಉನ್ನತಮಟ್ಟದ ಇಲಾಖಾ ಪರಿಶೀಲನಾ ಸಮಿತಿಯು ಕೈಗೊಳ್ಳಲಿದೆ. ಆಕ್ಷೇಪಣೆಗಳ ಪರಿಶೀಲನಾ ಸಂದರ್ಭದಲ್ಲಿ ಸಮಿತಿಯ ಮುಂದೆ ಅಭ್ಯರ್ಥಿಗಳಿಗೆ ಖುದ್ದಾಗಿ ಹಾಜರಾಗಿ (personal hearing) ಅಹವಾಲುಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅವರ ಅಹವಾಲುಗಳೊಂದಿಗೆ ಸಲ್ಲಿಸುವ ಪೂರಕ ದಾಖಲೆಗಳನ್ನು ಪರಿಶೀಲಿಸಿ, ಶೈಕ್ಷಣಿಕ ಅರ್ಹತೆಯ ಕುರಿತು ಅಂತಿಮ ತೀರ್ಮಾನವನ್ನು ಕೈಗೊಂಡು, ಪ್ರಕ್ರಿಯೆ ಪೂರ್ಣಗೊಳಿಸಿ, ಶೀಘ್ರವಾಗಿ ಪ್ರಾಂಶುಪಾಲರ ಅಂತಿಮ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

**ಸಂಖ್ಯೆ:ಇಡಿ 347 ಡಿಸಿಇ 2025(ಇ)**

**(ಡಾ. ಎಂ. ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು